**Bangalore**
**Regional News**
**08.04.2025 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಕೆಲವು ಆಯ್ದ ಬಾಟಲ್‌ಗಳ ನೀರು ಅಸುರಕ್ಷಿತ - ಸಚಿವ ದಿನೇಶ್ ಗುಂಡೂರಾವ್ ಮಾಹಿತಿ**

**೨. ದ್ವಿತೀಯ ಪಿಯುಸಿ ಪರೀಕ್ಷೆ ೧ರ ಫಲಿತಾಂಶ ಪ್ರಕಟ ; ಶೇಕಡ ೭೩.೪೫ ರಷ್ಟು ವಿದ್ಯಾರ್ಥಿಗಳು ತೇರ್ಗಡೆ**

**೩. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದವಿಲ್ಲ - ಸಚಿವ ಆರ್.ಬಿ. ತಿಮ್ಮಾಪುರ ಸ್ಪಷ್ಟನೆ**

**೪. ತ್ಯಾಜ್ಯವನ್ನು ಆದಾಯವಾಗಿ ಪರಿವರ್ತಿಸಿದ ನೈಋತ್ಯ ರೈಲ್ವೆ ಇಲಾಖೆ - ೧೮೮ ಕೋಟಿ ರೂಪಾಯಿ ದಾಖಲೆಯ ಆದಾಯ**

**೫. ಕರಾವಳಿ ಜಿಲ್ಲೆಗಳಲ್ಲಿ ಗುಡುಗು, ಗಾಳಿ ಸಹಿತ ಮಳೆ ; ಮುಂದಿನ ೫ ದಿನಗಳಲ್ಲಿ ಗರಿಷ್ಠ ತಾಪಮಾನದಲ್ಲಿ ಏರಿಕೆ ಸಂಭವ**

**<><*<><>*><>**

**ಬಾಟಲ್‌ಗಳಲ್ಲಿ ಲಭ್ಯವಾಗುವ ಕೆಲವು ಕಂಪನಿಗಳ ಕುಡಿಯುವ ನೀರು ಕಳಪೆ ಎಂದು ಆಹಾರ ಇಲಾಖೆ ವರದಿ ತಿಳಿಸಿದೆ. ಈ ಕುರಿತು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈಗಾಗಲೇ ೨೯೬ ಕುಡಿಯುವ ನೀರಿನ ಬಾಟಲ್ ಮಾದರಿಗಳ ಪರೀಕ್ಷೆ ಮಾಡಲಾಗಿದೆ. ಇದರಲ್ಲಿ ೭೨ ಸುರಕ್ಷಿತ ಹಾಗೂ ೯೦ ಮಾದರಿಗಳು ಅಸುರಕ್ಷಿತ ಎಂದು ವರದಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.**

**ನೀರು ಮಾತ್ರವಲ್ಲದೇ ಲೋಪ ಕಂಡುಬಂದ ಖಾರ ಮಿಕ್ಚರ್, ಪನ್ನೀರ್ ಹಾಗೂ ಐಸ್‌ಕ್ರೀಮ್ ಘಟಕಗಳಿಗೂ ನೋಟಿಸ್ ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.**

**<><*<><>*><>**

ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ರಾಜ್ಯದಲ್ಲಿ ಒಟ್ಟಾರೆ ಶೇಕಡ ೭೩.೪೫ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಕಲಾ ವಿಭಾಗದಲ್ಲಿ ಶೇಕಡ ೫೩.೨೯, ವಾಣಿಜ್ಯ ವಲಯದಲ್ಲಿ ಶೇಕಡ ೭೬.೦೭ ಮತ್ತು ವಿಜ್ಞಾನ ವಿಭಾಗದಲ್ಲಿ ಶೇಕಡ ೮೨.೫೪ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಎಂದಿನಂತೆ ಈ ಬಾರಿಯೂ ಬಾಲಕಿಯರೇ ಮೈಲುಗೈ ಸಾಧಿಸಿದ್ದಾರೆ. ಉಡುಪಿ ಜಿಲ್ಲೆ ಶೇಕಡ ೯೩.೯೦ ರಷ್ಟು, ಫಲಿತಾಂಶದೊಂದಿಗೆ ಅಗ್ರಸ್ಥಾನದಲ್ಲಿದ್ದು, ದಕ್ಷಿಣ ಕನ್ನಡ ಶೇಕಡ ೯೩.೫೭ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆಯ ಶೇಕಡ ೮೫.೩೬ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಯಾದಗಿರಿ ಜಿಲ್ಲೆ ಶೇಕಡ ೪೮.೪೫ ರಷ್ಟು ಫಲಿತಾಂಶದೊಂದಿಗೆ ಕೊನೆಯ ಸ್ಥಾನದಲ್ಲಿದೆ. ದಕ್ಷಿಣ ಕನ್ನಡ ಜಿಲ್ಲೆಯ ಅಮೂಲ್ಯ ಕಾಮತ್ ಹಾಗೂ ದೀಪಾಶ್ರೀ ಎಸ್ ೬೦೦ರಲ್ಲಿ ೫೯೯ ಅಂಕಗಳನ್ನು ಪಡೆದುಕೊಂಡಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಮಂಗಳೂರಿನ ಎಕ್ಸ್‌ಪರ್ಟ್ ಪಿಯು ಕಾಲೇಜಿನ ಅಮೂಲ್ಯ ಕಾಮತ್ ಮೊದಲ ಸ್ಥಾನ ಪಡೆದಿದ್ದು, ಹೆತ್ತವರ ಪ್ರೋತ್ಸಾಹ ಹಾಗೂ ಉಪನ್ಯಾಸಕರ ನಿರಂತರ ಮಾರ್ಗದರ್ಶನವೇ ನನ್ನ ಈ ಸಾಧನೆಗೆ ಕಾರಣ ಎಂದು ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಅಮೂಲ್ಯ ಕಾಮತ್ (ವಿದ್ಯಾರ್ಥಿನಿ) (೨೨ ಸೆಕೆಂಡ್‌ಗಳು)

ದಕ್ಷಿಣ ಕನ್ನಡದ ಕೆನರಾ ಪಿಯು ಕಾಲೇಜಿನ ವಿದ್ಯಾರ್ಥಿನಿ ದೀಪಶ್ರಿ ವಾಣಿಜ್ಯ ವಿಭಾಗದಲ್ಲಿ ಮೊದಲ ಸ್ಥಾನ ಪಡೆದಿದ್ದಾರೆ.

ಧ್ವನಿ : ದೀಪಶ್ರಿ (ವಿದ್ಯಾರ್ಥಿನಿ) (೧೭ ಸೆಕೆಂಡ್‌ಗಳು)

ಕಲಾ ವಿಭಾಗದಲ್ಲಿ ಬಳ್ಳಾರಿಯ ಇಂದು ಪಿಯು ಕಾಲೇಜಿನ ವಿದ್ಯಾರ್ಥಿನಿ ಸಂಜನಾ ಬಾಯಿ ಪ್ರಥಮ ಸ್ಥಾನ ಪಡೆದಿದ್ದಾರೆ. ದ್ವಿತೀಯ ಪಿಯುಸಿಯಲ್ಲಿ ತೇರ್ಗಡೆ ಹೊಂದಿದ ಎಲ್ಲಾ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ. ರ‍್ಯಾಂಕ್ ಪಡೆದಿರುವ ವಿದ್ಯಾರ್ಥಿಗಳ ಸಾಧನೆ ಇತರರಿಗೆ ಸ್ಫೂರ್ತಿಯಾಗಲಿ ಎಂದು ತಿಳಿಸಿದ್ದಾರೆ. ಪರೀಕ್ಷೆಯಲ್ಲಿ ಅನುತೀರ್ಣರಾದ ಮಕ್ಕಳು ನಿರಾಶೆ, ಆತಂಕಕ್ಕೆ ಒಳಗಾಗದಿರಿ ಎಂದು ಕಿವಿಮಾತು ಹೇಳಿದ್ದಾರೆ.

<><*<><>*><>

ದ್ವಿತೀಯ ಪಿಯುಸಿ ಪರೀಕ್ಷೆ ೨ ಇದೇ ೨೪ ರಿಂದ ಮೇ ೮ರವರೆಗೆ ನಡೆಸಲಾಗುವುದು ಎಂದು ಪಿಯು ಶಿಕ್ಷಣ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ. ಮೊದಲ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಹಾಗೂ ಕಡಿಮೆ ಅಂಕ ಗಳಿಸಿದ ವಿದ್ಯಾರ್ಥಿಗಳು ೨ನೇ ಪರೀಕ್ಷೆ ಬರೆದು ಉತ್ತೀರ್ಣರಾಗಬಹುದು. ಇದೇ ೨೪ ರಂದು ಕನ್ನಡ, ೨೫ ರಂದು ರಾಜ್ಯಶಾಸ್ತ್ರ, ಸಂಖ್ಯಾಶಾಸ್ತ್ರ, ಜೀವಶಾಸ್ತ್ರ, ೨೬ ರಂದು ಇತಿಹಾಸ, ಭೌತಶಾಸ್ತ್ರ, ೨೮ ರಂದು ಭೂಗೋಳ ಶಾಸ್ತ್ರ, ರಾಸಾಯನ ಶಾಸ್ತ್ರ, ಮೂಲ ಗಣಿತ, ೨೯ ರಂದು ಇಂಗ್ಲೀಷ್, ಮೇ ೨ ರಂದು ಗಣಿತ ಶಾಸ್ತ್ರ, ೩ ರಂದು ಕಂಪ್ಯೂಟರ್ ವಿಜ್ಞಾನ ಪರೀಕ್ಷೆ ನಡೆಯಲಿದೆ.

<><*<><>*><>

ಹುಬ್ಬಳ್ಳಿಯ ಗೋಪನಕೊಪ್ಪದ ಸರ್ಕಾರಿ ಪದವಿಪೂರ್ವ ಕಾಲೇಜಿನ ನಾಗವೇಣಿ ರಾಯಚೂರು ಕಲಾ ವಿಭಾಗದಲ್ಲಿ ಐದನೇ ರ್‍ಯಾಂಕ್ ಪಡೆದಿದ್ದಾರೆ. ಮನೆಯಲ್ಲಿನ ಬಡತನವನ್ನ ಮೆಟ್ಟಿ ಈ ಸಾಧನೆ ಮಾಡಿದ್ದಾರೆ. ನಾಗವೇಣಿ ತಂದೆ ಆಂಥೋನಿ ರಾಯಚೂರು ಅಂಗವಿಕಲರಾಗಿದ್ದು, ಕೂಲಿ ಕೆಲಸ ಮಾಡುತ್ತ ಮಗಳಿಗೆ ಶಿಕ್ಷಣ ಕೊಡಿಸಿದ್ದಾರೆ.

ಧ್ವನಿ : ನಾಗವೇಣಿ (ವಿದ್ಯಾರ್ಥಿನಿ) (೧೫ ಸೆಕೆಂಡ್‌ಗಳು)

<><*<><>*><>

ಅಬಕಾರಿ ಇಲಾಖೆಯಲ್ಲಿ ಯಾವುದೇ ರೀತಿಯ ಭ್ರಷ್ಟಾಚಾರಕ್ಕೆ ಆಸ್ಪದ ನೀಡುವುದಿಲ್ಲ ಎಂದು ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಮಗ್ರ ತನಿಖೆ ನಡೆಸುವಂತೆ ಈಗಾಗಲೇ ಆಯುಕ್ತರಿಗೆ ಸೂಚಿಸಲಾಗಿದೆ. ಇದುವರೆಗೂ ಯಾರೂ ಈ ಸಂಬಂಧ ದೂರು ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳ ಕಿರುಕುಳ, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದೂರು ನೀಡಿದರೇ ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ, ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

<><*<><>*><>

ನೈಋತ್ಯ ರೈಲ್ವೆ ೨೦೨೪-೨೫ರ ಆರ್ಥಿಕ ವರ್ಷದಲ್ಲಿ ತ್ಯಾಜ್ಯ ವಿಲೇವಾರಿ ಮೂಲಕ ೧೮೮ ಕೋಟಿ ೬ ಲಕ್ಷ ರೂಪಾಯಿ ಆದಾಯ ಗಳಿಸಿ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಇದು ನೈಋತ್ಯ ರೈಲ್ವೆಯ ಇತಿಹಾಸದಲ್ಲೇ ಅತ್ಯಧಿಕ ತ್ಯಾಜ್ಯ ಮಾರಾಟವಾಗಿದೆ. ೨೦೨೨-೨೩ರ ಹಣಕಾಸು ವರ್ಷದ ದಾಖಲೆಯನ್ನು ಮೀರಿಸಿದೆ. ಆಸ್ತಿ ನಿರ್ವಹಣೆ ಮತ್ತು ಆದಾಯ ವೃದ್ಧಿಯಲ್ಲಿ ತನ್ನ ಶ್ರೇಷ್ಠತೆಯನ್ನು ಸಾಬೀತುಪಡಿಸಿದೆ. ತ್ಯಾಜ್ಯ ಮಾರಾಟವನ್ನು ಸಂಪೂರ್ಣ ಪಾರದರ್ಶಕವಾಗಿ ಮತ್ತು ನ್ಯಾಯಸಮ್ಮತವಾಗಿ ನಡೆಸುವ ಸಲುವಾಗಿ, ಭಾರತೀಯ ರೈಲ್ವೆಯು ಇ-ಹರಾಜು ವೇದಿಕೆ

ತಿತಿತಿ.iಡಿeಠಿs.gov.iಟ ಮೂಲಕ ಸಾರ್ವಜನಿಕ ಹರಾಜು ಪ್ರಕ್ರಿಯೆ ನಡೆಸಿತ್ತು. ನೈಋತ್ಯ ರೈಲ್ವೆಗೆ ಭಾರೀ ಆದಾಯ ಲಭಿಸುವುದರ ಜೊತೆಗೆ, ನಿಲ್ದಾಣಗಳು, ಹಳಿಗಳು, ಡಿಪೋಗಳು ಮತ್ತು ಶೆಡ್‌ಗಳಲ್ಲಿ ಇರುವ ಅನವಶ್ಯಕ ತ್ಯಾಜ್ಯಗಳನ್ನು ತೆರವುಗೊಳಿಸಿ ಸೌಂದರ್ಯವನ್ನು ಹೆಚ್ಚಿಸುವ ಮತ್ತು ಪರಿಸರ ಸ್ನೇಹಿ ಪರಿಸರವನ್ನು ಒದಗಿಸಲು ಇದು ಸಹಾಯಕವಾಗಿದೆ.

<><*<><>*><>

ಬೆಂಗಳೂರಿನಲ್ಲಿ ನಡೆದ ಲೈಂಗಿಕ ಕಿರುಕುಳ ಘಟನೆ ವಿಚಾರದಲ್ಲಿ ನೀಡಿದ ವಿವಾದಾತ್ಮಕ ಹೇಳಿಕೆಗೆ ಗೃಹ ಸಚಿವ ಜಿ. ಪರಮೇಶ್ವರ್ ಕ್ಷಮೆಯಾಚಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಹೇಳಿಕೆಯಿಂದ ಸಹೋದರಿಯರಿಗೆ ನೋವು ಉಂಟಾಗಿದ್ದರೆ ವಿಷಾದಪಡಿಸುವುದಾಗಿ ತಿಳಿಸಿದ್ದಾರೆ.

ತಮ್ಮ ಹೇಳಿಕೆಯನ್ನು ತಿರುಚಲಾಗಿದೆ ಎಂದು ಹೇಳಿದ ಅವರು, ಮಹಿಳೆಯರ ರಕ್ಷಣೆಗೆ ಸದಾ ಬದ್ಧ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ನಿರ್ಭಯ ನಿಧಿಯ ಯೋಜನೆಯಡಿಯಲ್ಲಿ ಹಂಚಿಕೆಯಾದ ಬಹುಪಾಲು ಹಣವನ್ನು ಬಳಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಪೋಷಣ್ ಅಭಿಯಾನ ಯೋಜನೆಯಡಿ ೨೦೧೮ ರಿಂದ ಪ್ರತಿ ಮಾರ್ಚ್ ಮತ್ತು ಏಪ್ರಿಲ್ ತಿಂಗಳಲ್ಲಿ ಪೋಷಣ್ ಸಪ್ತಾಹ ಆಚರಿಸುತ್ತಿದೆ. ಈ ಮೂಲಕ ಪೋಷಣ್ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತದೆ. ಪೋಷಣ್ ಅಭಿಯಾನ ಕಾರ್ಯಕ್ರಮದ ಮೂಲಕ ಸಮುದಾಯ ಭಾಗವಹಿಸುವಿಕೆ ಹಾಗೂ ಸಮುದಾಯದ ಮಟ್ಟದಲ್ಲಿ ನಡವಳಿಕೆಯ ಬದಲಾವಣೆ ತರುವ ಮೂಲಕ ಅಪೌಷ್ಟಿಕತೆಯನ್ನು ಕಡಿಮೆ ಮಾಡುವ ಉದ್ದೇಶವು ಈ ಅಭಿಯಾನದ ಭಾಗವಾಗಿದೆ.

ಮಕ್ಕಳಲ್ಲಿ ಬೊಜ್ಜು ನಿವಾರಣೆ ಮತ್ತು ಆರೋಗ್ಯಕರ ಜೀವನಶೈಲಿ ಕುರಿತು ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಮೂಲ ಉದ್ದೇಶವಾಗಿದೆ. ವಿಜಯಪುರ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೆ.ಕೆ.ಚೌಹಾಣ್ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಉಪ ನಿರ್ದೇಶಕ ಕೆ.ಕೆ.ಚವಾಣ್ (೩೦ ಸೆಕೆಂಡ್‌ಗಳು)

<><*<><>*><>

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ನಿರ್ಗಮಿತ ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಅವರನ್ನು ಸೆಂಟ್ರಲ್ ಕಾಲೇಜಿನ ಆವರಣದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ಇಂದು ಆತ್ಮೀಯವಾಗಿ ಅಭಿನಂದಿಸಲಾಯಿತು.

<><*<><>*><>

ವಿಜಯಪುರ ಜಿಲ್ಲೆಯಲ್ಲಿ ಹಿಂದುಳಿದ ಪ್ರದೇಶವಾದ ಚಡಚಣ ಭಾಗದ ನಿರುದ್ಯೋಗಿ ಯುವಕರಿಗೆ ಹೆಚ್ಚಿನ ಆದ್ಯತೆ ನೀಡಿ ಉದ್ಯೋಗಾವಕಾಶ ಕಲ್ಪಿಸುವಂತೆ ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ಕೆಲವೆಡೆ ಮಳೆಯಾಗಿದೆ. ಅತಿಹೆಚ್ಚು ಉಷ್ಣಾಂಶ ೪೧.೧ ಡಿಗ್ರಿ ಸೆಲ್ಸಿಯೆಸ್ ಕಲಬುರಗಿಯಲ್ಲಿ ದಾಖಲಾಗಿದೆ. ಉಡುಪಿ, ಉತ್ತರಕನ್ನಡ, ದಕ್ಷಿಣ ಕನ್ನಡ ಸೇರಿದಂತೆ ಒಂದೆರಡು ಸ್ಥಳಗಳಲ್ಲಿ ಇಂದು ಗುಡುಗು ಗಾಳಿ ಸಹಿತ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕನಾಟಕದ ಒಳನಾಡಿನಲ್ಲಿ ಮುಂದಿನ ೫ ದಿನಗಳಲ್ಲಿ ಗರಿಷ್ಠ ತಾಪಮಾನದಲ್ಲಿ ೧ ರಿಂದ ೩ ಡಿಗ್ರಿಯಷ್ಟು ಏರಿಕೆಯಾಗಲಿದೆ. ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣವಿರಲಿದೆ.

<><*<><>*><>

ಕೊಪ್ಪಳ  ಜಿಲ್ಲೆಯಲ್ಲಿರುವ ಕೂಸಿನ ಮನೆ ಕಾರ್ಯನಿರ್ವಹಣೆ ಕುರಿತು ಲಂಡನ್ ಕಿಂಗ್ಸ್ ಕಾಲೇಜು ಸಂಶೋಧನಾ ತಂಡ ಇಂದು ಹಲಗೇರಿಯ ಕೂಸಿನ ಮನೆಗೆ  ಭೇಟಿ ನೀಡಿ ಪರಿಶೀಲನೆ ನಡೆಸಿತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>